(ಸದನವು ಬೆಳಿಗ್ಗೆ 10 ಗಂಟೆ 30 ನಿಮಿಷಕ್ಕೆ ಪ್ರಾರಂಭವಾಯಿತು. ಭಾರತೀಯ ಜನತಾ ಪಕ್ಷದ ಸದಸ್ಯರುಗಳು ಸದನದ ಬಾವಿಯಲ್ಲಿ ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತಾ ಧರಣಿಯನ್ನು ಮುಂದುವರೆಸಿದ್ದರು)

## 1. ಪ್ರಕಟಣೆ

**ಅಧ್ಯಕ್ಷರು:** ಈಗ ಒಂದು ಪ್ರಕಟಣೆಯಿದೆ. ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಗಳಿಂದ ಬಂದಿರುವ ಸಂದೇಶವನ್ನು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 118ರ ಮೇರೆಗೆ 2015ನೇ ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ದಿನಾಂಕ: 25.11.2015 ರಂದು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಿರುತ್ತಾರೆಂದು ತಿಳಿಸಿರುತ್ತಾರೆ.

## 2. ವಿಧೇಯಕವನ್ನು ಹಿಂದಕ್ಕೆ ಪಡೆಯುವುದು

**ಅಧ್ಯಕ್ಷರು:** ಬಾಬುರಾವ್‌ರವರೆ, ವಿಧೇಯಕವನ್ನು ಹಿಂದಕ್ಕೆ ಪಡೆಯುವುದನ್ನು ಮಂಡಿಸಿ.

**ಶ್ರೀ ಬಾಬುರಾವ್ ಚಿಂಚನಸೂರು (ಜವಳಿ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವರು):** ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕವನ್ನು ಪರ್ಯಾಲೋಚನೆಗೆ ತೆಗೆದುಕೊಳ್ಳದೇ ಹಿಂಪಡೆಯಲು ಅನುಮತಿ ಕೋರುತ್ತೇನೆ.

**ಅಧ್ಯಕ್ಷರು:** ಪ್ರಸ್ತಾವನೆಯನ್ನು ಮಂಡಿಸಲಾಯಿತು. ಈಗ ಅದನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವನೆ ಹೀಗಿದೆ, "2011 ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕವನ್ನು ಪರ್ಯಾಲೋಚನೆಗೆ ತೆಗೆದುಕೊಳ್ಳದೆ ಹಿಂದಕ್ಕೆ ಅನುಮತಿ ನೀಡುವುದು.

ಪ್ರಸ್ತಾವದ ಪರವಾಗಿರುವವರು ಹೌದು ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು ಇಲ್ಲ ಎಂದು ಸೂಚಿಸಬೇಕು